ಅಂಗೀಕರಿಸಬೇಕೆಂದು ಕೋರುತ್ತೇನೆ.

ಛೇರ್ಮನ್:- ಪ್ರಸ್ತಾವ ಏನೆಂದರೆ, "ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೃತ್ತಿನಿರತ ವೈದ್ಯರ ನೋಂದಣಿ ಮತ್ತು ವೈದ್ಯಕೀಯ ವೃತ್ತಿನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕ 1992ನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

9. ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ 1992 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ. ಕೆ. ಶಿವಕುಮಾರ್ (ಬಂಧೀಖಾನೆ ಮತ್ತು ಗೃಹ ರಕ್ಷಕ ರಾಜ್ಯ ಮಂತ್ರಿಗಳು):- ಮಾನ್ಯ ಅಧ್ಯಕ್ಷರೇ, ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ - 1992ರನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಛೇರ್ಮನ್:- ಪ್ರಸ್ತಾವ ಏನೆಂದರೆ, "1993ರ ದಂಡ ಪ್ರಕ್ರಿಯಾ ಸಂಹಿತೆ(ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ - 2

ಛೇರ್ಮನ್:- "ಖಂಡ ಎರಡು ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ಎರಡು ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಛೇರ್ಮನ್:- ಪ್ರಸ್ತಾವ ಏನೆಂದರೆ "ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವ ಅಂಗೀಕಾರ

ಶ್ರೀ ಡಿ. ಕೆ. ಶಿವಕುಮಾರ್: (ಬಂಧೀಖಾನೆ ಮತ್ತು ಗೃಹರಕ್ಷಕ ರಾಜ್ಯ ಸಚಿವರು):- ಮಾನ್ಯ ಅಧ್ಯಕ್ಷರೇ, 1992 ರ ದಂಡ ಪ್ರಕ್ರಿಯಾ ಸಂಹಿತೆ, ಕರ್ನಾಟಕ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಛೇರ್ಮನ್:- ಪ್ರಸ್ತಾವ ಏನೆಂದರೆ, 1992ರ ದಂಡ ಪ್ರಕ್ರಿಯಾ ಸಂಹಿತೆ ಕರ್ನಾಟಕ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಿಲಾಯಿತು.

10. 1992ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಿಗಳ (ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಕೆ. ಜೆ. ಜಾರ್ಜ್:- (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):- ಮಾನ್ಯ

ಅಧ್ಯಕ್ಷರೆ, 1992ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಿಗಳ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರಿ ಕೆ. ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):- ಮಾನ್ಯ ಸಭಾಧ್ಯಕ್ಷರೇ, ಇದು ಅರ್ಬನ್ ಡೆವಲಪ್‌ಮೆಂಟ್ ಅಥಾರಿಟಿ ಎಲ್ಲಿ ಇದೆ, ಅಲ್ಲಿ ಎಂ. ಎಲ್. ಸಿ. ಗಳನ್ನು ಮೆಂಬರ್ ಮಾಡತಕ್ಕಂಥ ವಿಚಾರ. ಅವರು ಖಾಯಂ ಎಲ್ಲಿ ಇರುತ್ತಾರೋ ಅಲ್ಲಿ ಅವರಿಗೆ ಸದಸ್ಯತ್ವ ಕೊಡತಕ್ಕಂಥ ವಿಚಾರದ ಬಗ್ಗೆ ತಿದ್ದುಪಡಿ ಇದೆ. ಆಮೇಲೆ ಮೈಸೂರು ಮತ್ತು ಹುಬ್ಬಳ್ಳಿ, ಧಾರವಾಡದಲ್ಲಿ ಮೊದಲು ಎಸ್.ಪಿ.ಗಳಿದ್ದರು, ಅವರು ಮೆಂಬರುಗಳಾಗಿದ್ದರು. ಈಗ ಅವರ ಬದಲಿಗೆ ಕಮೀಷನರ್ಸ್ ಬಂದಿದ್ದಾರೆ. ಆ ಕಮೀಷನರ್ಸ್‌ನ್ನು ಸಹ ಅರ್ಬನ್ ಡೆವಲಪ್‌ಅಂಟ್ ಅಥಾರಿಟಿಗೆ ಮೆಂಬರ್ ಮಾಡತಕ್ಕಂಥ ಒಂದು ಸಣ್ಣ ತಿದ್ದುಪಡಿ ಅಷ್ಟೆ.

ಶ್ರಿ ಬಿ.ಎಸ್.ಯಡಿಯೂರಪ್ಪ: (ಶಿಕಾರಿಪುರ):- ಮಾನ್ಯ ಅಧ್ಯಕ್ಷರೇ, ಇವತ್ತು ನಗರಾಭಿವೃದ್ಧಿ ಪ್ರಾಧಿಕಾರದ ಈ ತಿದ್ದುಪಡಿಯಲ್ಲಿ ವಿಧಾನಪರಿಷತ್ತಿನ ಸದಸ್ಯರನ್ನು ಕಮಿಟಿ ಮೆಂಬರ್ಸ್ ಮಾಡುವುದಕ್ಕೆ ಒಂದು ಪ್ರಾವಿಷನ್ ಮಾಡಿದ್ದಾರೆ, ಪರವಾಗಿಲ್ಲ. ಆದರೆ ಇವತ್ತು ಪೋಲೀಸ್ ಕಮೀಷನರ್ಸ್‌ನ್ನು ಅಥವಾ ಜಿಲ್ಲಾ ಪದನಿಮಿತ್ತ ಪೋಲೀಸ್ ಸೂಪರಿಂಟೆಂಡೆಂಟರನ್ನು ಮಾಡಬೇಕು ಎಂದು ತಾವು ಹೊರಟಿದ್ದೀರಿ.

ಛೇರ್ಮನ್:- ಅವರು ಮೊದಲು ಇದ್ದರು.

ಶ್ರಿ ಕೆ. ಜೆ. ಜಾರ್ಜ್: ಮೈಸೂರಿನಲ್ಲಿ ಎಸ್. ಪಿ. ಈಗ ಸದಸ್ಯರಾಗಿದ್ದಾರೆ. ಎಸ್. ಪಿ. ಬದಲಿಗೆ ಈಗ ಕಮೀಷನರ್ ಬಂದಿದ್ದಾರೆ.

ಶ್ರಿ ಬಿ. ಎಸ್. ಯಡಿಯೂರಪ್ಪ:- ಅಷ್ಟೇ ತಾನೆ.

ಶ್ರಿ ಕೆ. ಜೆ. ಜಾರ್ಜ್:- ಅಷ್ಟೆ.

ಛೇರ್ಮನ್:- ಮುನಿಸಿಪಾಲಿಟಿ ಇದ್ದದ್ದು ಈಗ ಕಾರ್ಪೊರೇಷನ್ ಆಯಿತು. ಕಾರ್ಪೊರೇಷನ್‌ನಲ್ಲಿ ಕಮೀಷನರ್ ಬಂದಿದ್ದಾರೆ.

ಶ್ರಿ ಕೆ. ಜೆ. ಜಾರ್ಜ್:- ಮಾನ್ಯ ಅಧ್ಯಕ್ಷರೇ, ಸೆಕ್ಷನ್ 2, (1) (ಡಿ) ಖಂಡದಲ್ಲಿ "ಒಬ್ಬ ಸದಸ್ಯ" ಎಂಬ ಪದಗಳಿಗೆ, "ಒಬ್ಬ ಸದಸ್ಯ" ಎಂದು ಹಾಕಿದ್ದಾರೆ. ಅದನ್ನು "ಸದಸ್ಯರು" ಎಂದು ಓದಿಕೊಳ್ಳಬೇಕು.

ಛೇರ್ಮನ್:- ಪ್ರಸ್ತಾವ ಏನೆಂದರೆ:- " 1992ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2

ಛೇರ್ಮನ್:- ಪ್ರಸ್ತಾವ ಏನೆಂದರೆ, "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ :-

ಛೇರ್ಮನ್:- ಪ್ರಸ್ತಾವ ಏನೆಂದರೆ: "ಮೊದಲನೇ ಖಂಡ, ದೀರ್ಘ ಶೀರ್ಷಿಕೆ,

ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

(ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು.)

ಪ್ರಸ್ತಾವದ ಅಂಗೀಕಾರ.

ಶ್ರೀ ಕೆ. ಜೆ. ಜಾರ್ಜ್(ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಗಳು):- 1992ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಛೇರ್ಮನ್:- ಪ್ರಸ್ತಾವ ಏನೆಂದರೆ, "1992ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

11. 1992ರ ಕರ್ನಾಟಕ ಕೈಗಾರಿಕೆ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್: (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು):- ಮಾನ್ಯ ಅಧ್ಯಕ್ಷರೇ , ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವೆಯರ ಪರವಾಗಿ 1992ನೇ ಸಾಲಿನ ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಮಲ್ಲಾರಿ ಗೌಡ ಎಸ್. ಪಾಟೀಲ್:- ಮಾನ್ಯ ಅಧ್ಯಕ್ಷರೇ, ಕರ್ನಾಟಕ ಸ್ಟೇಟ್ ಫೈನಾನ್ಸ್ ಕಾರ್ಪೊರೇಷನ್, ಮ್ಯಾನೇಜಿಂಗ್ ಡೈರೆಕ್ಟರ್ ಯಾರಿದ್ದಾರೆ ಅವರು ಈ ಕರ್ನಾಟಕ ಇಂಡಸ್ಟ್ರಿಯಲ್ ಏರಿಯಾ ಡೆವಲಪ್‌ಮೆಂಟ್ ಬೋರ್ಡಿಗೆ ಮೆಂಬರ್ ಆಗಬೇಕೆಂದು ಈ ತಿದ್ದುಪಡಿ ವಿಧೇಯಕವನ್ನು ಸಭೆಯ ಮುಂದೆ ಪರ್ಯಾಲೋಚನೆಗಾಗಿ ಮಂಡಿಸಿದ್ದೇನೆ. ದಯವಿಟ್ಟು ಈ ತಿದ್ದುಪಡಿ ವಿಧೇಯಕಕ್ಕೆ ಒಪ್ಪಿಗೆ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಛೇರ್ಮನ್:- ಪ್ರಸ್ತಾವ ಏನೆಂದರೆ, "1992ನೇ ಇಸವಿಯ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ; 2

ಛೇರ್ಮನ್:- "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ:-

ಛೇರ್ಮನ್:- ಪ್ರಸ್ತಾವ ಏನೆಂದರೆ: "ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು.